# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| | | |
|---|---|---|
| ಭಾಗ – ೧<br>Part – I | ಬೆಂಗಳೂರು, ಗುರುವಾರ, ೧೧ ಸೆಪ್ಟೆಂಬರ್, ೨೦೨೫ (ಭಾದ್ರಪದ ೨೦, ಶಕವರ್ಷ ೧೯೪೭)<br>BENGALURU, THURSDAY, 11 SEPTEMBER, 2025 (BHADRAPADA 20, SHAKAVARSHA 1947) | ಸಂ. ೫೭೧<br>No. 571 |


## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 266 ಸೆನೆನಿ 2025.

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ:10.09.2025

### ಸುತ್ತೋಲೆ

**ವಿಷಯ:** ಒಳಮೀಸಲಾತಿ ಅಳವಡಿಸಿಕೊಂಡು ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸುವ ಬಗ್ಗೆ.

**ಉಲ್ಲೇಖ:**
1. ದಿನಾಂಕ 25.11.2024 ರ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೆನೆನಿ 2024.
2. ದಿನಾಂಕ 29.03.2025 ರ ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 388 ಸೆನೆನಿ 2024.
3. ದಿನಾಂಕ 11.04.2025 ರ ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 388 ಸೆನೆನಿ 2024.

*****

ಉಲ್ಲೇಖಿತ ಸುತ್ತೋಲೆಗಳಲ್ಲಿ ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳಿಗೆ ಒಳಮೀಸಲಾತಿ ಜಾರಿಗೊಳಿಸುವ ಸಲುವಾಗಿ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾದ ಹಿನ್ನಲೆಯಲ್ಲಿ ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ಹೊಸದಾಗಿ ನೇರ ನೇಮಕಾತಿಯನ್ನು ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿರುತ್ತದೆ.

ಪ್ರಸ್ತುತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ಆಯೋಗವು ವರದಿಯನ್ನು ಸಲ್ಲಿಸಿದ್ದು, ಸಚಿವ ಸಂಪುಟವು ಕೆಲವು ಮಾರ್ಪಾಡುಗಳೊಂದಿಗೆ ಸದರಿ ವರದಿಯನ್ನು ಅಂಗಿಕರಿಸಿದ್ದು, ಸರ್ಕಾರದಿಂದ ಈ ಕೆಳಕಂಡ ಆದೇಶ/ ಸುತ್ತೋಲೆಗಳನ್ನು ಹೊರಡಿಸಲಾಗಿರುತ್ತದೆ.

1. ದಿನಾಂಕ 25.08.2025 ರ ಸರ್ಕಾರದ ಆದೇಶ ಸಂಖ್ಯೆ: ಸಕಇ 8 ಎಸ್ಎಲ್‌ಪಿ 2024.
2. ದಿನಾಂಕ: 03.09.2025 ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೆಹಿಮ 2025.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



3. ದಿನಾಂಕ:06.09.2025ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 03 ಸೆಹಿಮ 2025
4. ದಿನಾಂಕ: 06.09.2025 ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 249 ಸೆನೆನಿ 2025.
5. ದಿನಾಂಕ 06.09.2025 ರ ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 388 ಸೆನೆನಿ 2024.

ಮೇಲ್ಕಂಡ ಆದೇಶ/ ಸುತ್ತೋಲೆಗಳಲ್ಲಿನ ನಿರ್ದೇಶನಗಳನ್ವಯ ಒಳಮೀಸಲಾತಿಯನ್ನು ಅಳವಡಿಸಿಕೊಂಡು ನೇರ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳುವಂತೆ ಎಲ್ಲಾ ಇಲಾಖೆ/ ನೇಮಕಾತಿ ಪ್ರಾಧಿಕಾರಗಳಿಗೆ ಈ ಮೂಲಕ ಸೂಚಿಸಲಾಗಿದೆ.

(**ಡಾ: ಕೆ.ಜಿ. ಜಗದೀಶ**)
ಸರ್ಕಾರದ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH